**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 164, ವಿದ್ಯಾಪೀಠ ಬೆಂಗಳೂರು.**

ಸಂಖ್ಯೆ: ಸ.ಅ/ವಾ-164/ಪಿಆರ್//2021-22 ದಿನಾಂಕ: 20-05-2021

**ಮೇ ಮಾಹೆಯ ವಾರ್ಡ್ ಸಮಿತಿ ಸಭೆಯ ನಡಾವಳಿಗಳು**

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ: 21-09-2020ರ ಆದೇಶದಂತೆ ದಿನಾಂಕ: 20-05-2021 ರಂದು ವಾರ್ಡ್ ಸಂಖ್ಯೆ: 164, ವಿದ್ಯಾಪೀಠದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಸ್ಥಳ : ಬಿಬಿಎಂಪಿ ವಾರ್ಡ್ ಕಛೇರಿ, ವಿದ್ಯಾಪೀಠ ಸರ್ಕಲ್ ಹತ್ತಿರ

ಸಮಯ : ಬೆಳಿಗ್ಗೆ 10.30 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಆರ್. ವಿಜಯ್‌ಕುಮಾರ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 3 | ಶ್ರೀಮತಿ ಶ್ವೇತಾ .ಬಿ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್-164, ವಿದ್ಯಾಪೀಠ |
| 4 | ಶ್ರೀ ವಿಷಕಂಠಯ್ಯ ಹೆಚ್.ಎನ್ | ಕೆಲಸ ಪರಿವೀಕ್ಷಕರು, ವಾರ್ಡ್-164, ವಿದ್ಯಾಪೀಠ |
| 5 | ಶ್ರೀ ಎಂ. ಸುರೇಶ್ | ಕಂದಾಯ ವಸೂಲಿಗಾರರು |
| 6 | ಡಾ॥ ಮಧುಸೂದನ್ | ವೈದ್ಯಾಧಿಕಾರಿಗಳು |
| 7 | ಶ್ರೀ ಸುನಿಲ್ | ಹಿರಿಯ ಆರೋಗ್ಯ ಪರಿವೀಕ್ಷಕರು |
| 8 | ಶ್ರೀ ಧವಳೇಶ್ | ಸಹಾಯಕ ಅಭಿಯಂತರರು, ಬೆಸ್ಕಾಂ |
| 9 | ಜಯರಾಮೇ ಗೌಡ | ಸ್ಯಾನಿಟರಿ ಧಫೇದಾರ್ |
| 10 | ಶ್ರೀಮತಿ ಲಕ್ಷ್ಮಿ | ಕಿರಿಯ ಆರೋಗ್ಯ ಪರಿವೀಕ್ಷಕರು |
| 11 | ಶ್ರೀ ಆನಂದ್ | ಸಹಾಯಕ ಅಭಿಯಂತರರು, ವಾರ್ಡ್-155 |
| 12 | ಶ್ರೀ ಗಿರಿಶ್ | ಸಹಾಯಕ ಅಭಿಯಂತರರು, ವಾರ್ಡ್-155 |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ಆರ್. ವಿಜಯ್‌ಕುಮಾರ್ ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳಿಗೆ ಮತ್ತು ಸದಸ್ಯರಿಗೆ ಸ್ವಾಗತ ಕೋರುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು. ಸಭೆಯಲ್ಲಿ ಏಪ್ರಿಲ್ ತಿಂಗಳ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಹಾಗೂ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಾರ್ಡ್ ಅಭಿಯಂತರರು ವರದಿಯನ್ನು ಓದಿ ತಿಳಿಸಿದರು.

1. ಬೆಸ್ಕಾಂ ರವರು ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಅಗೆತ ಮಾಡಿ ಕೇಬಲ್ ಅಳವಡಿಸಿದ್ದು, ಸರಿಯಾಗಿ ರಸ್ತೆಗಳನ್ನು ಸರಿಪಡಿಸದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ಹಾಜರಿದ್ದ ವಾರ್ಡ್ ಸದಸ್ಯರು ಮತ್ತು ಸಾರ್ವಜನಿಕರು ತಿಳಿಸಿರುತ್ತಾರೆ. ಆದುದರಿಂದ, ಬೆಸ್ಕಾಂ ವತಿಯಿಂದ ಕೈಗೊಂಡಿರುವ ಕಾಮಗಾರಿಯನ್ನು ಆದಷ್ಟು ಬೇಗ ಪೂರ್ಣಗೊಳಿಸಿ ಅಗೆದಿರುವ ರಸ್ತೆಗಳನ್ನು ಸರಿಪಡಿಸದಿದ್ದಲ್ಲಿ ರಸ್ತೆ ಅಪಘಾತಗಳು ಸಂಭವಿಸುವ ಸಾಧ್ಯತೆ ಇರುತ್ತದೆ ಎಂದು ತಿಳಿಸಿದರು. ಹಾಗೂ ಹೆಚ್ಚುವರಿಯಾಗಿ ಸ್ಥಳದಲ್ಲೇ ಬಿಟ್ಟಿರುವ ಕೇಬಲ್‌ಗಳನ್ನು ತೆರವುಗೊಳಿಸಲು ಬೆಸ್ಕಾಂ ಅಧಿಕಾರಿಗಳಿಗೆ ಸೂಚಿಸುವಂತೆ ವಾರ್ಡ್ ಅಭಿಯಂತರರಿಗೆ ನೋಡಲ್ ಅಧಿಕಾರಿಗಳು ತಿಳಿಸಿರುತ್ತಾರೆ.

2. ವಾರ್ಡ್ ವ್ಯಾಪ್ತಿಯಲ್ಲಿ ಮಳೆಗಾಲದ ಕಾರಣದಿಂದಾಗಿ ರಸ್ತೆಗುಂಡಿಗಳನ್ನು ಮುಚ್ಚುವುದು, ಚರಂಡಿಗಳನ್ನು ದುಸ್ಥಿಗೊಳಿಸುವುದು ಮತ್ತು ಹಾಳಾಗಿರುವ ರಸ್ತೆಗಳ ಕಾಮಗಾರಿಯನ್ನು ತುರ್ತಾಗಿ ಕೈಗೆತ್ತಿಕೊಂಡು ನಿರ್ವಹಿಸಲು ಸಂಬಂಧಪಟ್ಟ ಅಭಿಯಂತರರಿಗೆ ತಿಳಿಸಲಾಯಿತು.

3. ವಾರ್ಡ್-164ರ ವ್ಯಾಪ್ತಿಯಲ್ಲಿ ಹಿರಿಯ ಆರೋಗ್ಯ ಪರಿವೀಕ್ಷಕರು ಪಾದಚಾರಿ ಮಾರ್ಗದಲ್ಲಿ ಅನಧಿಕೃತವಾಗಿ ಇಟ್ಟಿರುವ ತಳ್ಳುವ ಗಾಡಿಗಳು ಮತ್ತು ಅಂಗಡಿಗಳನ್ನು ತೆರವುಗೊಳಿಸಲಾಗಿದೆ ಎಂದು ವಾರ್ಡ್ ಕಮಿಟಿ ಸಭೆಯಲ್ಲಿ ತಿಳಿಸಿರುತ್ತಾರೆ.

4. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಹಿನ್ನೆಲೆಯಲ್ಲಿ ವಾರ್ಡ್‌ನ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸಂಚಾರಿ ಟೆಸ್ಟಿಂಗ್ ಸೆಂಟರ್‌ನ್ನು (ಮೊಬೈಲ್ ಯೂನಿಟ್) ಅಳವಡಿಸಿ ಹೆಚ್ಚು ಸಂಖ್ಯೆಯಲ್ಲಿ ಕೋವಿಡ್-19 ಪರೀಕ್ಷೆಗಳನ್ನು ಸಮರ್ಪಕವಾಗಿ ನಿರ್ವಹಿಸಲು ಅಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ.

5. ವಾರ್ಡ್-164ರ ವ್ಯಾಪ್ತಿಯಲ್ಲಿ ಈಗಾಗಲೇ ಅಳವಡಿಸಿರುವ ಸಿ.ಸಿ. ಟಿ.ವಿ ಕ್ಯಾಮರಾಗಳ ಕಾರ್ಯನಿರ್ವಹಣೆಯ ಬಗ್ಗೆ ಮಾಹಿತಿ, ಹೊಸದಾಗಿ ಸಿ.ಸಿ. ಟಿ.ವಿ ಕ್ಯಾಮರಾಗಳನ್ನು ಅಳವಡಿಸಲು ಅವಶ್ಯವಿರುವ ಪ್ರದೇಶಗಳ ಮಾಹಿತಿ, ಮತ್ತು ಅವಶ್ಯವಿರುವ ಒಟ್ಟು ಸಿ.ಸಿ. ಟಿ.ವಿ ಕ್ಯಾಮರಾಗಳ ಮಾಹಿತಿಯನ್ನು ನೀಡಲು ಸಭೆಯಲ್ಲಿ ಸೂಚಿಸಲಾಯಿತು.

6. ವಾರ್ಡ್-164ರ ವ್ಯಾಪ್ತಿಯಲ್ಲಿ ರಸ್ತೆಗಳ ನಾಮಫಲಕಗಳು ಹಾಳಾಗಿದ್ದು, ಸದರಿ ಪ್ರದೇಶಗಳಲ್ಲಿ ಹೊಸದಾಗಿ ನಾಮಫಲಕಗಳನ್ನು ಅಳವಡಿಸಲು ಕ್ರಮವಹಿಸಬೇಕೆಂದು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸದಸ್ಯರು ಮತ್ತು ಸಾರ್ವಜನಿಕರು ಸಭೆಯಲ್ಲಿ ತಿಳಿಸಿರುತ್ತಾರೆ. ಸದರಿ ಪ್ರದೇಶಗಳಲ್ಲಿ ನಾಮಫಲಕಗಳನ್ನು ಅಳವಡಿಸಲು ಕ್ರಮವಹಿಸಬೇಕೆಂದು ಕಾಮಗಾರಿ ವಿಭಾಗದ ವಾರ್ಡ್ ಅಭಿಯಂತರರಿಗೆ ಸೂಚಿಸಲಾಯಿತು.

7. ವಾರ್ಡ್-164ರ ವ್ಯಾಪ್ತಿಯಲ್ಲಿ ಮಾರ್ಷಲ್‌ಗಳು ಬ್ಲಾಕ್ ಸ್ಪಾಟ್‌ಗಳನ್ನು ಗುರುತಿಸಿ ಸದರಿ ಪ್ರದೇಶದಲ್ಲಿ ಸಾರ್ವಜನಿಕರಲ್ಲಿ ಹಸಿಕಸ ಮತ್ತು ಒಣಕಸವನ್ನು ಬೇರ್ಪಡಿಸಲು ಅರಿವು ಮೂಡಿಸುವ ಕ್ರಮಕೈಗೊಳ್ಳಬೇಕೆಂದು ಸಭೆಯಲ್ಲಿ ತಿಳಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ, ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ಕಛೇರಿ ಪ್ರತಿ.